## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 997 (1178) |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 07.03.2022 |
| ಉತ್ತರಿಸುವವರು | : | ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅರಣ್ಯ ಸಂಪತ್ತು ಜವಾಬ್ದಾರಿ ಹೊತ್ತ ಅರಣ್ಯ ಇಲಾಖೆಯ ಶೇಕಡಾ 60 ಸಿಬ್ಬಂದಿಗಳಿಗೆ ವಸತಿ ಸೌಲಭ್ಯವಿಲ್ಲದೆ ಶಿಥಿಲಗೊಂಡಿರುವ ಸರ್ಕಾರಿ ಮನೆಗಳ ದುರಸ್ಥಿಗೆ ನಿರೀಕ್ಷಿತ ಅನುದಾನವಿಲ್ಲದೆ ಹೊಸದಾಗಿ ಮನೆ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ; | ಅರಣ್ಯ ಇಲಾಖೆಯಲ್ಲಿ ಒಟ್ಟು 8898 ಕ್ಷೇತ್ರ ಸಿಬ್ಬಂದಿಗಳಿದ್ದು, 5380 ವಸತಿ ಗೃಹಗಳನ್ನು ಇಲ್ಲಿಯವರೆಗೆ ನಿರ್ಮಿಸಲಾಗಿರುತ್ತದೆ. ಕಳೆದ 3 ವರ್ಷಗಳಿಂದ ವಸತಿ ಗೃಹ ಮತ್ತು ಅರಣ್ಯ ವಿಶ್ರಾಂತಿ ಗೃಹಗಳ ದುರಸ್ಥಿಗಾಗಿ ವಾರ್ಷಿಕ ರೂ.1600.00 ಲಕ್ಷಗಳನ್ನು ಸರ್ಕಾರದಿಂದ ಬಿಡುಗಡೆಗೊಳಿಸಿದ್ದು, ಆದ್ಯತೆಯ ಮೇರೆಗೆ ವಸತಿ ಗೃಹಗಳ ದುರಸ್ಥಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.<br><br>ಕಳೆದ 2 ವರ್ಷಗಳಿಂದ ವಸತಿ ಗೃಹ ಹಾಗೂ ಕಛೇರಿ ಕಟ್ಟಡಗಳ ನಿರ್ಮಾಣಕ್ಕಾಗಿ ರೂ.1000.00 ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಅತ್ಯವಶ್ಯಕತೆ ಇರುವ ವಿಭಾಗಗಳಲ್ಲಿ ವಸತಿ ಗೃಹ ಹಾಗೂ ಕಛೇರಿ ಕಟ್ಟಡಗಳ ನಿರ್ಮಾಣ ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ರೂ.1300.00 ಲಕ್ಷಗಳನ್ನು ನಿಗದಿಪಡಿಸಿದ್ದು, ಇದರಲ್ಲಿ 72 ಸಿಬ್ಬಂದಿ ವಸತಿ ಗೃಹ ಹಾಗೂ 5 ಕಛೇರಿ ಕಟ್ಟಡಗಳ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. |
| ಆ) | ರಾಜ್ಯದ ಬಹುತೇಕ ಅರಣ್ಯ ಪ್ರದೇಶ ಹೊಂದಿರುವ ಜಿಲ್ಲೆಗಳಲ್ಲಿ ಇದೇ ಹಾಗಿದ್ದು, ಸದರಿ ಸಮಸ್ಯೆ ಕುರಿತಂತೆ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳುವುದೇ (ವಿವರ ಒದಗಿಸುವುದು) | ಸದರಿ ಸಮಸ್ಯೆ ಕುರಿತಂತೆ ಆಧ್ಯತೆಯ ಮೇಲೆ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಅಪಜೀ 13 ಎಫ್‌ಟಿಎಸ್ 2022

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು